Vijaya Karnataka

3/12/17

8/12/17

ಎಂ.ಪಿ. ಬಿರ್ಲಾ ಇನ್‌ಸ್ಟಿಟ್ಯೂಟ್ ಆಫ್ ಮ್ಯಾನೇಜ್‌ಮೆಂಟ್: ಕರ್ನಾಟಕ ರಾಜ್ಯೋತ್ಸವ. ಅತಿಥಿಗಳು: ಕೃಷಿ ವಿವಿ ನಿವೃತ್ತ ಉಪಕುಲಪತಿ ಡಾ. ಎಸ್. ಬಿಸಲಯ್ಯ, ಭಾರತೀಯ ವಿದ್ಯಾಭವನದ ನಿರ್ದೇಶಕ ಎಚ್.ಎಸ್. ಸುರೇಶ್. ಸ್ಥಳ: ಖಿಂಚ ಸಭಾಂಗಣ, ಭಾರತೀಯ ವಿದ್ಯಾಭವನ, ರೇಸ್ ಕೋರ್ಸ್ ರಸ್ತೆ. 11.30



ಂ.ಪಿ.ಬಿರ್ಲಾ ಇನ್ಸ್ಟಿಟ್ಯೂಟ್ ಆಫ್ ಮ್ಯಾನೇಜ್‌ಮೆಂಟ್ ಭಾರತೀಯ ದ್ಯಾಭವನದಲ್ಲಿ ಏರ್ಪಡಿಸಿದ್ದ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ದ್ಯಾಭವನದ ಅಧ್ಯಕ್ಷ ಎನ್.ರಾಮಾನುಜ ಅವರನ್ನು ಸನ್ಮಾನಿಸಲಾಯಿತು. ಎಸ್.ಬಿಸಲಯ್ಯ, ಡಾ.ಎನ್.ಎಸ್.ವಿಶ್ವನಾಥ್ ಮತ್ತಿತರರು ಇದ್ದರು.

Samyuktha Karnataka - 3/12/17

# ವೃತ್ತಿ ಜೀವನದ ಯಶಸ್ಸಿಗೆ ತಾಳ್ಮೆ ಅವಶ್ಯ

**ಬೆಂಗಳೂರು:** ಕರ್ನಾಟಕ ಏಕೀಕರಣದ ನಂತರ ನಾವು ಏನಾಗಿದ್ದೇವೆ ಎಂದು ಶೋಧಿಸಿಕೊಳ್ಳುವುದಕ್ಕೆ ಕನ್ನಡ ರಾಜ್ಯೋತ್ಸವ ಅವಕಾಶವಾಗಿದೆ ಎಂದು ಸಾಹಿತಿ ಡಾ. ಜಿ. ಕೃಷ್ಣಪ್ಪ ಅಭಿಪ್ರಾಯಪಟ್ಟರು.

ಭಾರತೀಯ ವಿದ್ಯಾಭವನದಲ್ಲಿ ಆಯೋಜಿಸಿದ್ದ ಕನ್ನಡ ರಾಜ್ಯೋತ್ಸವ ಸಮಾರಂಭದಲ್ಲಿ ಮಾತನಾಡಿದ ಅವರು, ಕರ್ನಾಟಕ ಎಂದರೆ ಭೌಗೋಳಿಕ ಪ್ರದೇಶವಷ್ಟೆ ಅಲ್ಲ, ಇದೊಂದು ಚೈತನ್ಯ ಮೂರ್ತಿಗಳ ನಾಡು. ಅವರ ಸ್ಫೂರ್ತಿಗಳನ್ನು ನಾವೆಲ್ಲ ಅಳವಡಿಸಿಕೊಳ್ಳಬೇಕಿದೆ ಎಂದ ಅವರು, ಎಂಬಿಎ ವಿದ್ಯಾರ್ಥಿಗಳಿಗೆ ತಾಳ್ಮೆ ಅತಿಮುಖ್ಯ. ಎಂತಹ ಸಂದರ್ಭದಲ್ಲಿಯೂ ತಾಳ್ಮೆ ಕಳೆದುಕೊಳ್ಳದೆ, ಶಾಂತತೆಯನ್ನು ಅಳವಡಿಸಿಕೊಳ್ಳಬೇಕು. ಕವಿ ಪಂಪನವರ ಮನುಷ್ಯ ಜಾತಿ ತಾನೊಂದೆ ವಲಂ, ಬಸವಣ್ಣನವರ ಸಪ್ತ ಸೂತ್ರಗಳನ್ನು ಮಕ್ಕಳಿಗೆ ಹೇಳಿಕೊಡಬೇಕೆಂದರು.

ಉದ್ಯಮಿ ಪ್ರೀತಿ ವಿಕ್ರಮ್ ಮಾತನಾಡಿ, ವಿದ್ಯಾರ್ಥಿಗಳು ಯಾವುದೇ ಕೋರ್ಸ್ ಅನ್ನು ಆಯ್ಕೆ ಮಾಡಿಕೊಂಡಾಗ, ನಿಮ್ಮ ಗುರಿ, ಉದ್ದೇಶ ಮುಖ್ಯವಾಗುತ್ತದೆ. ಅಂದಾಗ ಮಾತ್ರ ಹೆಚ್ಚಿನ ಜ್ಞಾನಾರ್ಜನೆ ಪಡೆಯಲು ಸಾಧ್ಯವಾಗುತ್ತದೆ. ವಿದ್ಯಾರ್ಥಿಗಳು ಶಿಕ್ಷಣದ ಜೊತೆ ಕೌಶಲ್ಯಗಳನ್ನು ಬೆಳೆಸಿಕೊಳ್ಳಬೇಕೆಂದು ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು. ಕೃಷಿ ವಿವಿ ನಿವೃತ್ತ ಉಪಕುಲಪತಿ ಡಾ. ಎಸ್. ಬಿಸಲಯ್ಯ, ಭಾರತೀಯ ವಿದ್ಯಾಭವನದ ನಿರ್ದೇಶಕ ಎಚ್.ಎನ್. ಸುರೇಶ್, ಭಾರತೀಯ ವಿದ್ಯಾಭವನದ ಅಧ್ಯಕ್ಷ ಎನ್. ರಾಮಾನುಜ ಹಾಜರಿದ್ದರು.



ಭಾರತೀಯ ವಿದ್ಯಾಭವನದಲ್ಲಿ ಎಂ.ಪಿ. ಬಿರ್ಲಾ ಇನ್‌ಸ್ಟಿಟ್ಯೂಟ್ ಆಫ್ ಮ್ಯಾನೇಜ್‌ಮೆಂಟ್ ಆಯೋಜಿಸಿದ್ದ ಕರ್ನಾಟಕ ರಾಜ್ಯೋತ್ಸವ ಸಮಾರಂಭದಲ್ಲಿ ಬೆಂಗಳೂರು ಕೃಷಿ ವಿವಿ ನಿವೃತ್ತ ಉಪಕುಲಪತಿ ಡಾ. ಎಸ್. ಬಿಸಲಯ್ಯ ಅವರನ್ನು ಸನ್ಮಾನಿಸಲಾಯಿತು.